**ಪ್ರಧಾನ ಸಿವಿಲ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ ಚಿಂಚೋಳಿ**

**ಸಿಸಿ ನಂ. 23/2023**

| | | | |
|---|---|---|---|
| **ಹೆಸರು** | **:** | **ಭೀಮರಾವ** | ಚಾ.ಸಾ. 4 |
| **ತಂದೆಯ ಹೆಸರು** | **:** | **ಸುಬ್ಬಣ್ಣ** | ಪ್ರಾ.ಸಾ. 2 |
| **ವಯಸ್ಸು** | **:** | **53 ವರ್ಷ** | ದಿನಾಂಕಃ 28-04-2025 |
| **ಉದ್ಯೋಗ** | **:** | **ಒಕ್ಕಲುತನ** | |
| **ವಾಸಸ್ಥಳ** | **:** | **ಚಂದಾಪುರ** | |

**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರಿಂದಃ**

ಸಿದ್ದಪ್ಪ ಮತ್ತು ಚಾಸಾ 5 ರವರು ನನಗೆ ಗೊತ್ತಿಲ್ಲ.

ಈಗ ನೋಡುತ್ತಿರುವ ದಾಖಲೆಯಲ್ಲಿ ನನ್ನ ಸಹಿ ಇದೆ. ಸದರಿ ದಾಖಲೆಯನ್ನು ನಿಪಿ-2 ಎಂದು ಮತ್ತು ಅದರಲ್ಲಿರುವ ನನ್ನ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು.

ಈಗ ನೋಡುತ್ತಿರುವ ಭಾವಚಿತ್ರಗಳಲ್ಲಿ ನಾನು ಇದ್ದೇನೆ. ಸದರಿ ಭಾವಚಿತ್ರಗಳನ್ನು ನಿಪಿ-3 ಮತ್ತು 4 ಎಂದು ಗುರುತಿಸಲಾಯಿತು.

ಈಗೆ 2 ವರ್ಷಗಳ ಹಿಂದೆ ನಾನು ಗುಲ್ಬರ್ಗಾಗೆ ಹೋಗುತ್ತಿರುವಾಗ ರಸ್ತೆ ಮಧ್ಯದಲ್ಲಿ ಪೋಲಿಸರುನನಗೆ ನಿಲ್ಲು ಎಂದು ಹೇಳಿ ನನ್ನ ಭಾವಚಿತ್ರ ಪಡೆದು ನನ್ನ ಸಹಿ ಪಡೆದಿರುತ್ತಾರೆ. ಯಾವ ಕಾರಣಕ್ಕಾಗಿ ಸಹಿ ಪಡೆದರು ಎಂದು ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ತನಿಖಾಧಿಕಾರಿಯವರ ಮುಂದೆ ಸಲ್ಲಿಸಿರುವ ಪಂಚನಾಮೆಗೆ ಈ ಸಾಕ್ಷಿ ಸಂಪೂರ್ಣ ಪ್ರತಿಕೂಲ ಸಾಕ್ಷ್ಯ ನುಡಿಯುತ್ತಿದ್ದು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೊಡುವಂತೆ ಸ.ಸ.ಅ.ರವರು ಅನುಮತಿ ಕೋರುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದಃ**

ದಿನಾಂಕಃ 02-06-2022 ರಂದು ಸಾಯಂಕಾಲ 5-15 ಗಂಟೆಗೆ ಪೋಲಿಸರು ಅಪಘಾತವಾದ ಸ್ಥಳದಲ್ಲಿ ಪಂಚನಾಮೆ ಮಾಡಿ ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಅದೇ ಸಮಯಕ್ಕೆ ಪಂಚನಾಮೆ ಕಾರಣ ಪೊಲೀಸರು ಭಾವಚಿತ್ರ ಪಡೆದಿರುತ್ತಾರೆ ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಎಲ್ಲಾ ಗೊತ್ತಿದ್ದರೂ ಆರೋಪಿ ಮಾತುಕೇಳಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿ ಪರವಾಗಿ ಶ್ರೀ MSS ವಕೀಲರಿಂದಃ ಇಲ್ಲಾ.</u>**

**(ಮುಕ್ತ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**
**ಓ.ಹೇ.ಕೇ. ಸರಿ ಇದೆ.**

**ಪ್ರಧಾನ ಪ್ರ.ದ.ನ್ಯಾ.ದಂ. ಚಿಂಚೋಳಿ**